| | | |
|---|---|---|
| ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು – 575 001. | ಕರ್ನಾಟಕ ಸರಕಾರ<br>GOVERNMENT OF KARNATAKA<br>( ಕಂದಾಯ ಇಲಾಖೆ ) | Deputy Commissioner & District Magistrate's Office, Dakshina Kannada District, Mangaluru – 575 001. |

ನಂ.ಎಂಎಜಿ(2)ಸಿಆರ್ 78/2022/171474/ಸಿ4 ದಿನಾಂಕ: 14-03-2022

" ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ರವರ ಕಚೇರಿ ನಡವಳಿಗಳು "

ವಿಷಯ: ಹಿಜಾಬ್ ಮತ್ತು ಕೇಸರಿ ಶಾಲು ವಿವಾದ ಹಿನ್ನಲೆಯಲ್ಲಿ ಶಾಂತಿ ಕಾಪಾಡುವ ಸಲುವಾಗಿ ಮುಂಜಾಗೃತ ಕ್ರಮವಾಗಿ ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144 ರನ್ವಯ ನಿಷೇಧಾಜ್ಞೆಯನ್ನು ವಿಧಿಸುವ ಬಗ್ಗೆ.

ಉಲ್ಲೇಖ:
1. ಈ ಕಚೇರಿಯ ಆದೇಶ ಸಮ ಸಂಖ್ಯೆ ದಿನಾಂಕ:13-02-2022,18-02-2022, 25-02-2022, 05-03-2022,12-03-2022.
2. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ಪತ್ರ ಸಂಖ್ಯೆ:08(4)/ಎಸ್ ಬಿ/ಸಾಮಾನ್ಯ/ದ.ಕ/2022 ದಿನಾಂಕ:14-03-2022.
3. ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144.

******

DISTRICT MAGISTRATE, D.K. GOVT. OF KARNATAKA ಕರ್ನಾಟಕ ಸರಕಾರ ಜಿಲ್ಲಾ ದಂಡಾಧಿಕಾರಿ, ದ.ಕ.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ: 14-02-2022 ರಿಂದ ರಾಜ್ಯಾದ್ಯಂತ ಪ್ರೌಢ ಶಾಲಾ ತರಗತಿಗಳ ಆರಂಭಕ್ಕೆ ಮಾನ್ಯ ಘನವೆತ್ತ ಕರ್ನಾಟಕ ಸರ್ಕಾರವು ಆದೇಶ ನೀಡಿರುತ್ತದೆ ಹಾಗೂ ದಿನಾಂಕ: 16-02-2022 ರ ಬಳಿಕ ಕಾಲೇಜುಗಳ ಆರಂಭಗೊಂಡಿರುತ್ತದೆ. ಶಾಲಾ ಕಾಲೇಜು ತರಗತಿಗಳ ಆರಂಭ ಸಮಯದಲ್ಲಿ ಹಿಜಾಬ್ ಮತ್ತು ಕೇಸರಿ ಶಾಲು ವಿವಾದ ನಡೆಯದಂತೆ ಅತ್ಯಂತ ಕಟ್ಟುನಿಟ್ಟಿನ ಬಂದೋಬಸ್ತ್ ವ್ಯವಸ್ಥೆ ಮಾಡಬೇಕಾಗಿರುತ್ತದೆ. ಈ ಹಿನ್ನಲೆಯಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ದಿನಾಂಕ:14-03-2022 ರ ಬೆಳಿಗ್ಗೆ 6.00 ಗಂಟೆಯಿಂದ ದಿನಾಂಕ:19-03-2022 ರ ಸಂಜೆ 6.00 ಗಂಟೆಯವರಿಗೆ ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ಘಟಕ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಲಾ ಕಾಲೇಜುಗಳ ಸುತ್ತಮುತ್ತಲು 200 ಮೀಟರ್ ಪ್ರದೇಶಗಳಲ್ಲಿ ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144 ರನ್ವಯ ನಿಷೇಧಾಜ್ಞೆ ಮುಂದುವರೆಸಿ ಉಲ್ಲೇಖ(1)ರಂತೆ ಆದೇಶ ಹೊರಡಿಸಲಾಗಿರುತ್ತದೆ.

ಪ್ರಸ್ತುತ ದಿನಾಂಕ: 15-03-2022 ರಂದು ಹಿಜಾಬ್ ಮತ್ತು ಕೇಸರಿ ಶಾಲು ವಿವಾದ ತೀರ್ಪು ನೀಡುವ ಸಾಧ್ಯತೆ ಇರುತ್ತದೆ . ರಾಜ್ಯದ ಹಲವಡೆ ಹಿಜಾಬ್ ವಿವಾದ ಸಂಬಂಧಿಸಿದಂತೆ ಗಲಾಟೆ ದೊಂಬಿ ಪ್ರಕರಣಗಳು ನಡೆದಿರುತ್ತದೆ. ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ಘಟಕ ವ್ಯಾಪ್ತಿಯು ಮತೀಯವಾಗಿ ಮತ್ತು ರಾಜಕೀಯವಾಗಿ ಅತೀ ಸೂಕ್ಷ್ಮ ಪ್ರದೇಶವಾಗಿರುವುದರಿಂದ ಯಾವುದೇ ಅಹಿತಕರ ಘಟನೆ ನಡೆಯದಂತೆ ಹಾಗೂ ಕಾನೂನು ಸುವ್ಯವಸ್ಥೆ ಕಾಪಾಡುವ ದೃಷ್ಟಿಯಿಂದ ದಿನಾಂಕ: 15-03-2022 ರ ಬೆಳಿಗ್ಗೆ 6.00 ಗಂಟೆಯಿಂದ ದಿನಾಂಕ: 19-03-2022 ರ ಸಂಜೆ 6.00 ಗಂಟೆಯವರೆಗೆ ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ಘಟಕ ವ್ಯಾಪ್ತಿಯಲ್ಲಿ ಬರುವ ಬಂಟ್ವಾಳ, ಬೆಳ್ತಂಗಡಿ, ಪುತ್ತೂರು, ಕಡಬ ಮತ್ತು ಸುಳ್ಯ ತಾಲೂಕುಗಳಲ್ಲಿ ಯಾವುದೇ ಪ್ರತಿಭಟನೆ ,ಸಾರ್ವಜನಿಕ ಸಭೆ, ಮೆರವಣಿಗೆ, ಪಾದಾಯಾತ್ರೆ

ಮತ್ತು ಸಂಭ್ರಮಚಾರಣೆ ಯಾ ವಿರೋಧಾಚಾರಣೆ ಅವಕಾಶವನ್ನು ನಿರ್ಭಂಧಿಸಿ ಮುಂಜಾಗ್ರತಾ ಕ್ರಮವಾಗಿ ಕಲಂ 144 ಸಿ.ಆರ್.ಪಿ.ಸಿ. ರಂತೆ ನಿಷೇದಾಜ್ಞೆಯನ್ನು ಜ್ಯಾರಿಗೊಳಿಸುವಂತೆ ಕೋರಿ ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರು ಉಲ್ಲೇಖ(2) ರಂತೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಜಿಲ್ಲೆಯ ಪ್ರಸಕ್ತ ವಿದ್ಯಮಾನಗಳನ್ನು ಗಣನೆಗೆ ತೆಗೆದುಕೊಂಡು, ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನಗಳಿಗೆ ಎಡೆಮಾಡಿಕೊಡದಂತೆ,ಶಾಂತಿ ಸುವ್ಯವಸ್ಥೆ ಹಾಗೂ ಸಾರ್ವಜನಿಕ ಹಿತವನ್ನು ಕಾಪಾಡುವ ಹಿತದೃಷ್ಟಿಯಿಂದ ಮುಂಜಾಗೃತಾ ಕ್ರಮವನ್ನು ತೆಗೆದುಕೊಳ್ಳುವುದು ಅಗತ್ಯವಿರುವುದರಿಂದ ನಿಷೇಧಾಜ್ಞೆಯನ್ನು ಮುಂದುವರೆಸುವುದು ಅವಶ್ಯವೆಂದು ಮನಗಂಡು ಈ ಕೆಳಗಿನಂತೆ ಆದೇಶಿಸಿದೆ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಅನುಸಾರ ಹಾಗೂ ಜಿಲ್ಲೆಯಲ್ಲಿ ಪ್ರಸ್ತುತ ಪರಿಸ್ಥಿತಿಯನ್ನು ಅವಲೋಕಿಸಿ ಸಾರ್ವಜನಿಕ ಶಾಂತಿ ಸುವ್ಯವಸ್ಥೆಯನ್ನು ಕಾಪಾಡುವ ಹಿತದೃಷ್ಟಿಯಿಂದ ನಿಷೇಧಾಜ್ಞೆ ವಿಧಿಸುವುದು ಅವಶ್ಯವೆಂದು ಮನಗಂಡು ಡಾ|| ರಾಜೇಂದ್ರ ಕೆ.ವಿ, ಭಾ.ಆ.ಸೇ. ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಆದ ನಾನು ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144 ರನ್ವಯ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ದಿನಾಂಕ: 15-03-2022 ರ ಬೆಳಿಗ್ಗೆ 6.00 ಗಂಟೆಯಿಂದ ದಿನಾಂಕ:19-03-2022 ರ ಸಂಜೆ 6.00 ಗಂಟೆಯವರೆಗೆ ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ಘಟಕ ವ್ಯಾಪ್ತಿಯ ಪ್ರದೇಶಗಳಲ್ಲಿ ನಿಷೇಧಾಜ್ಞೆಯನ್ನು ವಿಧಿಸಿ ಆದೇಶವನ್ನು ಹೊರಡಿಸಿರುತ್ತೇನೆ.

**ಈ ನಿಷೇದಾಜ್ಞೆ ಅವಧಿಯಲ್ಲಿ**

1) 05ಕ್ಕಿಂತ ಹೆಚ್ಚು ಜನರು ಒಟ್ಟಾಗಿ ಗುಂಪು ಸೇರುವುದು ನಿಷೇಧಿಸಿದೆ.
2) ಶಸ್ತ್ರಗಳು, ದೊಣ್ಣೆಗಳು, ಕತ್ತಿಗಳು, ಈಟಿಗಳು, ಗದೆಗಳು. ಬಂದೂಕುಗಳು, ಚಾಕುಗಳು, ಕೋಲುಗಳ ಅಥವಾ ಲಾಠಿಗಳನ್ನು ಅಥವಾ ದೈಹಿಕ ಹಿಂಸೆಯನ್ನುಂಟು ಮಾಡುವ ಇತರ ಯಾವುದೇ ವಸ್ತುಗಳನ್ನು ಒಯ್ಯುವುದನ್ನು ನಿಷೇಧಿಸಿದೆ.
3) ಪಟಾಕಿಗಳನ್ನು ಸಿಡಿಸುವುದು, ಯಾವುದೇ ಕ್ಷಾರಕ ಪದಾರ್ಥ ಅಥವಾ ಸ್ಫೋಟಕಗಳನ್ನು ಒಯ್ಯುವುದನ್ನು ನಿಷೇಧಿಸಿದೆ.
4) ಯಾವುದೇ ರೀತಿಯ ವಿಜಯೋತ್ಸವ,ಸಾರ್ವಜನಿಕ ಮೆರವಣಿಗೆ,ಪ್ರತಿಭಟನೆ. ಸಾರ್ವಜನಿಕ/ರಾಜಕೀಯ ಸಭೆ ಸಮಾರಂಭಗಳನ್ನು ನಡೆಸುವುದನ್ನು ನಿಷೇಧಿಸಿದೆ.
5) ಕಲ್ಲುಗಳನ್ನು ಅಥವಾ ಇತರ ಕ್ಷಿಪಣಿಗಳನ್ನು ಎಸೆಯುವ ಅಥವಾ ವೇಗದಿಂದ ಒಗೆಯುವ ಸಾಧನಗಳ ಅಥವಾ ಉಪಕರಣಗಳ ಒಯ್ಯುವಿಕೆಯನ್ನು ಶೇಖರಿಸುವುದನ್ನು ಮತ್ತು ತಯಾರಿಸುವುನ್ನು ನಿಷೇಧಿಸಿದೆ.
6) ವ್ಯಕ್ತಿಗಳ ಅಥವಾ ಅವರ ಶವಗಳ ಅಥವಾ ಆಕೃತಿಗಳ ಅಥವಾ ಪ್ರತಿಕೃತಿಗಳ ಪ್ರದರ್ಶನ ಮಾಡುವುದನ್ನು ನಿಷೇಧಿಸಿದೆ.
7) ಸಭ್ಯತೆ ಅಥವಾ ನೀತಿಯನ್ನು ಅತಿಕ್ರಮಿಸಬಹುದಾದ ಅಥವಾ ಸಾರ್ವಜನಿಕ ಸುವ್ಯವಸ್ಥೆಗೆ ಭಾದೆಯನ್ನುಂಟು ಮಾಡಬಹುದಾದ ಅಥವಾ ಅಪರಾಧವನ್ನು ಮಾಡಲು ಪ್ರಚೋದಿಸಬಹುದಾದ ಬಹಿರಂಗ ಘೋಷಣೆಗಳನ್ನು ಮಾಡುವುದು ಹಾಡುಗಳನ್ನು ಹಾಡುವುದು, ಸಂಗೀತವನ್ನು ನುಡಿಸುವುದು ಆವೇಶಭರಿತ ಭಾಷಣ ಮಾಡುವುದು ಮತ್ತು ಚಿತ್ರಗಳನ್ನು ಸಂಕೇತಗಳನ್ನು ಭಿತ್ತಿ ಪತ್ರಗಳನ್ನು ಅಥವಾ ಇತರ ಯಾವುದೇ ವಸ್ತು ಅಥವಾ ಪದಾರ್ಥವನ್ನು ತಯಾರಿಸುವುದು, ಪ್ರದರ್ಶಿಸುವುದು ಅಥವಾ ಪ್ರಸಾರ ಮಾಡುವುದನ್ನು ನಿಷೇಧಿಸಿದೆ.
8) ಯಾವುದೇ ರೀತಿಯ ವಿಜಯೋತ್ಸವ, ಸಾರ್ವಜನಿಕ ಮೆರವಣಿಗೆ, ಪಟಾಕಿ ಮಾರಾಟ ಮಾಡುವುದು, ಒಯುವುದು, ಪಟಾಕಿ ಸಿಡಿಸುವುದು, ಸಭೆ ಸಮಾರಂಭಗಳನ್ನು ನಡೆಸುವುದನ್ನು ನಿಷೇಧಿಸಿದೆ.

DISTRICT MAGISTRATE, D.K. GOVT. OF KARNATAKA

ಈ ಆದೇಶವು ದಿನಾಂಕ: 15-03-2022 ರ ಬೆಳಿಗ್ಗೆ 6.00 ಗಂಟೆಯಿಂದ ದಿನಾಂಕ: 19-03-2022 ರ ಸಂಜೆ 6.00 ಗಂಟೆಯವರೆಗೆ ಜ್ಯಾರಿಯಲ್ಲಿರುತ್ತದೆ. ಸರ್ಕಾರದಿಂದ ನಡೆಸಲ್ಪಡುವ ಯಾವುದೇ ಕಾರ್ಯಕ್ರಮಗಳ ಸಭೆ ಸಮಾರಂಭಗಳಿಗೆ, ಬ್ಯಾಂಕ್ / ಎಟಿಎಂ ಭದ್ರತಾ ಸಿಬ್ಬಂದಿಗಳು ಮತ್ತು ಕೋವಿಡ್-19 ನಿಯಂತ್ರಣ ಕರ್ತವ್ಯದಲ್ಲಿ ಸಿಬ್ಬಂದಿಗಳ ಕರ್ತವ್ಯ ನಿರ್ವಹಿಸುವ ಸ್ಥಳಕ್ಕೆ ಅನ್ವಯಿಸುವುದಿಲ್ಲ. ಪೂರ್ವ ನಿಗದಿತ/ ಬಾಹ್ಯ(External exam)ಗಳು ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳು ಮುಂದುವರೆಯುವುದು ಹಾಗೂ ಈ ಪರೀಕ್ಷೆಗಳಿಗೆ ಅನ್ವಯಿಸುವುದಿಲ್ಲ. ಕೇಂದ್ರ ಮತ್ತು ರಾಜ್ಯ ಸರ್ಕಾರದ ಕೋವಿಡ್-19 ಗೆ ಸಂಬಂಧಿಸಿದಂತೆ ಜ್ಯಾರಿಗೊಳಿಸಿದ ಮಾರ್ಗಸೂಚಿಗಳನ್ನು ಪಾಲನೆ ಮಾಡುವಂತೆ ಸೂಚಿಸಿದೆ.

ಈ ಆದೇಶವನ್ನು ದಿನಾಂಕ: **14-03-2022** ರಂದು ನನ್ನ ಸ್ವಹಸ್ತಾಕ್ಷರ ಮತ್ತು ಮುದ್ರೆಯೊಂದಿಗೆ ಹೊರಡಿಸಲಾಗಿದೆ.

DISTRICT MAGISTRATE, D.K. GOVT. OF KARNATAKA ಕರ್ನಾಟಕ ಸರಕಾರ

**ಡಾ|| ಕೆ.ವಿ. ರಾಜೇಂದ್ರ** ಭಾ.ಆ.ಸೇ
**ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,**
**ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.**

**ರಿಗೆ,**

ಪೊಲೀಸು ಅಧೀಕ್ಷಕರು, ದ.ಕ.ಜಿಲ್ಲೆ, ಮಂಗಳೂರು ಇವರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.

ಪ್ರತಿಯನ್ನು:

1. ಪೊಲೀಸ್ ಆಯುಕ್ತರು, ಮಂಗಳೂರು ನಗರ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ದ.ಕ ಜಿಲ್ಲಾ ಪಂಚಾಯತ್, ಮಂಗಳೂರು
3. ಆಯುಕ್ತರು, ಮಂಗಳೂರು ಮಹಾನಗರ ಪಾಲಿಕೆ, ಮಂಗಳೂರು.
4. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಮಂಗಳೂರು.
5. ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ,ದ.ಕ ಮಂಗಳೂರು.
6. ಉಪನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ,ದ.ಕ ಮಂಗಳೂರು.
7. ಸಹಾಯಕ ಆಯುಕ್ತರು, ಮಂಗಳೂರು/ಪುತ್ತೂರು ಇವರಿಗೆ.
8. ತಹಶೀಲ್ದಾರರು ಮಂಗಳೂರು, ಬಂಟ್ವಾಳ, ಪುತ್ತೂರು, ಸುಳ್ಯ, ಬೆಳ್ತಂಗಡಿ, ಮೂಡಬಿದ್ರೆ, ಕಡಬ, ಮುಲ್ಕಿ
9. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಂಗಳೂರು-ಇವರಿಗೆ ಮೇಲ್ಕಂಡ ಆದೇಶವನ್ನು ಮಾಧ್ಯಮಗಳಲ್ಲಿ ಪ್ರಚುರಪಡಿಸುವ ಬಗ್ಗೆ ಸೂಕ್ತ ಕ್ರಮಕ್ಕಾಗಿ